ಸರ್ಕಾರಿ ಪ್ರೌಢ ಶಾಲೆಯ ಕೊರತೆ

736 (1328) ಡಾ.ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀ ಎಸ್.ಆರ್.ಪಾಟೀಲ ಸರ್ಕಾರಿ ಪ್ರೌಢಶಾಲೆ, ಇಂಡಿಯಲ್ಲಿ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿರುವ ಸಂಖ್ಯೆ ಎಷ್ಟು; ಪ್ರತಿ ತರಗತಿಯ ಪ್ರತಿ ವಿಭಾಗದಲ್ಲಿ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿರುವ ಸಂಖ್ಯೆ ಎಷ್ಟು;

ಆ) ಶಾಲೆಯಲ್ಲಿ ಎಷ್ಟು ಕೋಣೆಗಳಿವೆ; ಅವುಗಳಲ್ಲಿ ಎಷ್ಟು ಕೋಣೆಗಳನ್ನು ಮುಖ್ಯ ಗುರುಗಳು, ಕಛೇರಿ ಮತ್ತು ಗಣಕ ಯಂತ್ರಕ್ಕಾಗಿ ಉಪಯೋಗಿಸಲಾಗುತ್ತಿದೆ; ಎಷ್ಟು ಕೋಣೆಗಳನ್ನು ವರ್ಗದ ಕೊಠಡಿಗಳನ್ನಾಗಿ ಉಪಯೋಗಿಸಲಾಗುತ್ತಿದೆ;

ಇ) ಶಾಲೆಗೆ ಮಂಜೂರಾದ ಬೋಧಕ ಸಿಬ್ಬಂದಿ ಎಷ್ಟು; ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ಮತ್ತು ಎಷ್ಟು ಹೆಚ್ಚುವರಿ ಶಿಕ್ಷಕರ ಅವಶ್ಯಕತೆ ಇದೆ;

ಈ) ಈ ಶಾಲೆಗೆ ಹೆಚ್ಚುವರಿಯಾಗಿ ಡಿವಿಜನ್‌ಗಳನ್ನು ಕೋಣೆಗಳನ್ನು, ಬೋಧಕ ಸಿಬ್ಬಂದಿಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಉ) ಹಾಗಿದ್ದರೆ, ಈ ಮಂಜೂರಾತಿಗಳನ್ನು ಎಂದು ಮಾಡಲಾಗುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಶ್ರೀ ಎಸ್.ಆರ್.ಪಾಟೀಲ ಸರ್ಕಾರಿ ಪ್ರೌಢಶಾಲೆ, ಇಂಡಿಯಲ್ಲಿ
8ನೇ ತರಗತಿಯಲ್ಲಿ 332 ವಿದ್ಯಾರ್ಥಿಗಳು,
9ನೇ ತರಗತಿಯಲ್ಲಿ 302 ವಿದ್ಯಾರ್ಥಿಗಳು,
10ನೇ ವರ್ಗದಲ್ಲಿ 264 ವಿದ್ಯಾರ್ಥಿಗಳು,

ಹೀಗೆ ಒಟ್ಟು 898 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ.

ಅ) ಈ ಶಾಲೆಯಲ್ಲಿ 8 ಆರ್.ಸಿ.ಸಿ.ಕೋಣೆಗಳಿವೆ. 4 ತಾತ್ಕಾಲಿಕ ಷೆಡ್ಡುಗಳು ಇರುತ್ತವೆ. ಅದರಲ್ಲಿ ಮುಖ್ಯೋಪಾದ್ಯಾಯರ ಕೋಣೆ–1, ಗಣಕಯಂತ್ರ ಕೋಣೆ–1 ವರ್ಗ ಕೋಣೆಗಳು–10 ಇರುತ್ತವೆ.

ಇ) ಶಾಲೆಗೆ ಒಟ್ಟು 22 ಬೋಧಕ ಸಿಬ್ಬಂದಿಗಳನ್ನು ಮಂಜೂರು ಮಾಡಲಾಗಿದೆ. ಯಾವುದೇ ಹುದ್ದೆಗಳು ಖಾಲಿ ಇರುವುದಿಲ್ಲ. ಹೆಚ್ಚುವರಿ ಶಿಕ್ಷಕರ ಅವಶ್ಯಕತೆ ಇರುವುದಿಲ್ಲ.

ಈ) ರಾಜ್ಯಯ ವಲಯ ಯೋಜನೆಯಡಿ 3 ಹೆಚ್ಚುವರಿ ಕೋಣೆಯನ್ನು ಒದಗಿಸಿದ್ದು, ಇದಕ್ಕಾಗಿ 2009–10ನೇ ಸಾಲಿಗೆ 9.89 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಹೆಚ್ಚುವರಿ ಬೋಧಕ ಸಿಬ್ಬಂದಿಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಮೈಸೂರು ವಿಶ್ವವಿದ್ಯಾನಿಲಯದ ಅವ್ಯವಹಾರ

737 (1331) ಡಾ: ಮಹದೇವಪ್ಪ ಹೆಚ್.ಸಿ. (ಟಿ.ನರಸೀಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಪ್ರೊ. ಜೆ. ಶಶಿಧರ್ ಪ್ರಸಾದ್‌ರವರು ಕುಲಪತಿಯಾಗಿದ್ದ ಅವಧಿಯಲ್ಲಿ (2006–07) ನಡೆದಿರುವ ಭ್ರಷ್ಟಾಚಾರ ಹಾಗೂ ಹಗರಣಗಳ ಬಗ್ಗೆ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳ ನೇತೃತ್ವದ ಏಕ ಸದಸ್ಯ ಆಯೋಗ ಅಕ್ಟೋಬರ್ 2009ರಲ್ಲಿ ಘನವೆತ್ತ ರಾಜ್ಯಪಾಲರಿಗೆ ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದ್ದು, ಸದರಿ ವರದಿಯ ಬಗ್ಗೆ ಸರ್ಕಾರವು ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು;

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಮೈಸೂರು ವಿಶ್ವವಿದ್ಯಾಲಯದಲ್ಲಿ ಕುಲಪತಿಯಾಗಿದ್ದ ಪ್ರೊ. ಜೆ. ಶಶಿಧರ ಪ್ರಸಾದ್ ಇವರ ಆಧಿಕಾರಾವಧಿಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಹಾಗೂ ಹಗರಣಗಳ ಬಗ್ಗೆ ಕರ್ನಾಟಕ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಶ್ರೀ ಹೆಚ್. ರಂಗವಿಠ್ಠಲಾಚಾರ್‌ರವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ನೇಮಿಸಲಾಗಿತ್ತು. ಸದರಿ ಆಯೋಗವು